# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –153 ಜಯನಗರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಜಯನಗರ ವಾರ್ಡ್–153 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:21/12/2021 ಮಂಗಳವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಶ್ರೀಮತಿ. ವರಲಕ್ಷ್ಮಮ್ಮ ಎಲ್. ನೋಡಲ್ ಅಧಿಕಾರಿ ರವರು.
2. ಶ್ರೀ. ನವೀನ್‌ಕುಮಾರ್ ಕೆ. ಕಿರಿಯ ಅಭಿಯಂತರರು.
3. ಶ್ರೀ. ವಿಜಯಕುಮಾರ್ ಕೆ.ಆರ್ ಕಿರಿಯ ಆರೋಗ್ಯ ಪರಿವೀಕ್ಷಕರು.
4. ಶ್ರೀ. ಮೂರ್ತಿ ಸಹಾಯಕ ಅಭಿಯಂತರರು (ವಿದ್ಯುತ್–ದಕ್ಷಿಣ).
5. ಶ್ರೀ. ಕೆ.ಬಿ. ಮಂಜುನಾಥ್, ಜಲ ಪರಿವೀಕ್ಷಕರು.
6. ಶ್ರೀಮತಿ. ಭೂದೇವಿ, ತೋಟಗಾರಿಕೆ ಇಲಾಖೆ.
7. ಶ್ರೀ. ಚನ್ನೇಗೌಡ ಎ.ಎಸ್.ಐ, ಮೈಕೋ ಲೇಔಟ್ ಸಂಚಾರ ಪೊಲೀಸ್ ಠಾಣೆ.
8. ಶ್ರೀ. ಬಹದ್ದೂರ್ ಭೀಮಪ್ಪ, ಡಾ॥ ರಘುನಾಥ್, ಶ್ರೀ. ಜಯಕೃಷ್ಣನ್, ಶ್ರೀ ಅನೀಸ್ ಅಹಮದ್, ಶ್ರೀ. ಕಮಲ್ ಕಬೀರ್ & ಶ್ರೀ. ಫಜಲ್ ಖಾನ್ (ಸಾರ್ವಜನಿಕರು).

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಬೆಸ್ಕಾಂ ಇಲಾಖೆ, ಅಧಿಕಾರಿಗಳು ವಾರ್ಡ್ 153.
2. ಪೊಲೀಸ್ ಇಲಾಖೆ ಅಧಿಕಾರಿಗಳು (ಸಂಚಾರ) ಜಯನಗರ.
3. ಅರಣ್ಯ ಇಲಾಖೆಯ ಅಧಿಕಾರಿಗಳು.
4. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಮತ್ತು ಸುವ್ಯವಸ್ಥೆ) ಸಿದ್ಧಾಪುರ.
5. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧಿಕಾರಿಗಳು.

*********



Scanned with CamScanner

1. ವಾರ್ಡ್‌–153 ರ ಕುಂದು ಕೊರತೆಗಳ ಬಗ್ಗೆ ಚರ್ಚಿಸುವ ಸಂಬಂಧ ದಿನಾಂಕ:21/12/2021 ಮಂಗಳವಾರದಂದು ಮಧ್ಯಾಹ್ನ 3.00 ಗಂಟೆಗೆ ನಿಗದಿತ ಸಮಯಕ್ಕೆ ಸಭೆಯನ್ನು ಪ್ರಾರಂಭಿಸಲಾಯಿತು.

2. ವಾರ್ಡಿನ ಸ್ಥಳಿಯರಾದ ಶ್ರೀ. ರಘುನಾಥ್ ರವರು ಮಾತನಾಡಿ 1ನೇ ಬ್ಲಾಕ್ ಜಯನಗರ ಸುತ್ತಮುತ್ತ ವ್ಯಾಪ್ತಿಯಲ್ಲಿ ಕಸ ನಿರ್ವಹಣೆಯು ಸಮರ್ಪಕವಾಗಿ ವಿಲೇವಾರಿಯಾಗುತ್ತಿರುವ ಬಗ್ಗೆ ಸಂತೋಷ ವ್ಯಕ್ತಪಡಿಸಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ನೋಡಲ್ ಅಧಿಕಾರಿಯವರು ಹಾಗೂ ಬಿಬಿಎಂಪಿ ಅಧಿಕಾರಿಗಳು ಧನ್ಯವಾದ ತಿಳಿಸಿದರು.

3. ವಾರ್ಡಿನ ಸ್ಥಳಿಯರಾದ ಶ್ರೀ. ರಘುನಾಥ್ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಜಯನಗರ 1ನೇ ಬ್ಲಾಕ್ ಮತ್ತು 2ನೇ ಬ್ಲಾಕ್ ಸುತ್ತಮುತ್ತ ಅನಧಿಕೃತವಾಗಿ ನಿಲ್ಲಿಸಿರುವ ವಾರಸುದಾರರಿಲ್ಲದ ಹಳೆಯ ವಾಹನಗಳನ್ನು ತೆಗೆದು ಹೊಸೂರು ರಸ್ತೆಯ ಬಳಿ ಪಾಲಿಕೆ ನೀಡಿರುವ ಸ್ಥಳದಲ್ಲಿ ಹಾಕಲು ಅವಕಾಶವಿದ್ದರೂ ಸಹ ಸಂಬಂಧಪಟ್ಟ ಪೊಲೀಸ್ ಇನ್ಸ್‌ಪೆಕ್ಟರ್, ಜಯನಗರ ಸಂಚಾರ ಪೊಲೀಸ್ ಇಲಾಖೆ ರವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲವೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಪೊಲೀಸ್ ಇನ್ಸ್‌ಪೆಕ್ಟರ್ ರವರಿಗೆ ಪತ್ರ ಬರೆದು ಈ ಅನಧಿಕೃತ ವಾಹನಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ವಹಿಸಲು ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಹಾಗೂ ಈ ಹಿಂದಿನ ಸಭೆಗಳಿಗೂ ಸಹ ಪೊಲೀಸ್ ಇನ್ಸ್‌ಪೆಕ್ಟರ್, ಜಯನಗರ ಸಂಚಾರ ಪೊಲೀಸ್ ಇಲಾಖೆ ರವರು ಹಾಜರಾಗದೆ ಇರುವ ಬಗ್ಗೆ ಅಸಮಧಾನ ವ್ಯಕ್ತಪಡಿಸಿ ಈ ಬಗ್ಗೆ ಸಂಬಂಧಪಟ್ಟ ಪೊಲೀಸ್ ಇಲಾಖೆಯ ಮೇಲಾಧಿಕಾರಿಗಳ ಗಮನ ಹರಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಜಯನಗರ ಸಂಚಾರ ಪೊಲೀಸ್ ಠಾಣೆಯ ಅಧಿಕಾರಿಗಳು ಹಾಜರಿದ್ದು, ಸಾರ್ವಜನಿಕ ಕುಂದು ಕೊರತೆಗಳನ್ನು ಬಗೆಹರಿಸಲು ಸಹಕಾರ ನೀಡುವಂತೆ ಸಹಾಯಕ ಪೊಲೀಸ್ ಆಯುಕ್ತರು, ಸಂಚಾರ ರವರು ಈ ಬಗ್ಗೆ ಗಮನ ಹರಿಸುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು

**ಕ್ರಮ : ಸಹಾಯಕ ಪೊಲೀಸ್ ಆಯುಕ್ತರು ಸಂಚಾರ**
**ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್, ಜಯನಗರ ಸಂಚಾರ**



Scanned with CamScanner

4. ವಾರ್ಡಿನ ಸ್ಥಳಿಯರಾದ ಶ್ರೀ. ರಘುನಾಥ್ ರವರು ಮಾತನಾಡಿ ಲಾಲ್‌ಬಾಗ್ ಸಿದ್ಧಾಪುರ ಗೇಟ್ ಸಿಗ್ನಲ್ ಬಳಿ ಬೆಳಗ್ಗೆ 8.00 ರಿಂದ 9.0 ಗಂಟೆಯವರೆಗೆ ಹಾಗೂ ಸಂಜೆ 5.00 ರಿಂದ 7.00 ಗಂಟೆಯವರೆಗೆ ಸಂಚಾರ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿದ್ದಲ್ಲಿ ಸಾರ್ವಜನಿಕರ ಸಂಚಾರಕ್ಕೆ ಅನುಕೂಲವಾಗುತ್ತದೆ. ಹಾಗೂ ಸದರಿ ಸ್ಥಳದಲ್ಲಿ ಸಿಗ್ನಲ್ ಲೈಟ್‌ಗಳನ್ನು ಅಳವಡಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಪೊಲೀಸ್ ರವರಿಗೆ ತಿಳಿಸಲು ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.

**ಕ್ರಮ : ಸಹಾಯಕ ಪೊಲೀಸ್ ಆಯುಕ್ತರು ಸಂಚಾರ**
**ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್, ಜಯನಗರ ಸಂಚಾರ**

5. ವಾರ್ಡ್ 153ರ ಸ್ಥಳೀಯರಾದ ಶ್ರೀ. ಭೀಮಪ್ಪ ರವರು ಮಾತನಾಡಿ ಗುಲ್ಬರ್ಗಾ ಕಾಲೋನಿ ಪ್ರವೇಶದ ಹತ್ತಿರ ಹಾಗೂ ಬೈರಸಂದ್ರ ಕರೆಯ ಜಂಕ್ಷನ್ ಬಳಿ ಸಿ.ಸಿ. ಕ್ಯಾಮರಾವನ್ನು ಅಳವಡಿಸುವಂತೆ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಿದರು.

**ಕ್ರಮ: ವಾರ್ಡಿನ ಅಭಿಯಂತರರು**

6. ವಾರ್ಡ್ 153ರ ಸ್ಥಳೀಯರಾದ ಶ್ರೀ. ಭೀಮಪ್ಪ ರವರು ಮಾತನಾಡಿ ಗುಲ್ಬರ್ಗಾ ಕಾಲೋನಿಯ ಬಳಿ ಇರುವ ವಿದ್ಯುತ್ ಕಂಬವು ವಾಲಿದ್ದು, ಬೀಳುವ ಸ್ಥಿತಿಯಲ್ಲಿರುತ್ತದೆ ಹಾಗೂ ಕಂಬದ ತಂತಿಗಳು ಜೋತು ಬಿದ್ದಿದ್ದು ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುವ ಮುನ್ಸೂಚನೆ ಇರುತ್ತದೆ. ಆದ್ದರಿಂ ಕೂಡಲೇ ಸದರಿ ವಿದ್ಯುತ್ ಕಂಬವನ್ನು ಸರಿಪಡಿಸುವಂತೆ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಬೆಸ್ಕಾಂ ಅಧಿಕಾರಿಯವರಿಗೆ ಪತ್ರ ಬರೆದು ಈ ಕೂಡಲೇ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ವಾರ್ಡ್ ಅಭಿಯಂತರರಿಗೆ ತಿಳಿಸಿದರು. ಹಾಗೂ ಬೆಸ್ಕಾಂ ಇಲಾಖಾ ಅಧಿಕಾರಿಗಳು ವಾರ್ಡ್ ಕಮಿಟಿ ಸಭೆಗೆ ಹಾಜರಾಗಿ ಸಾರ್ವಜನಿಕ ಕುಂದು ಕೊರತೆಗಳನ್ನು ನಿವಾರಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಬೇಕಾಗಿರುವುದರಿಂದ ಕಡ್ಡಾಯವಾಗಿ ಸಮಿತಿ ಸಭೆಗಳಿಗೆ ಹಾಜರಾಗುವಂತೆ ಬೆಸ್ಕಾಂನ ಹಿರಿಯ ಅಧಿಕಾರಿಗಳು ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.

**ಕ್ರಮ : ವಾರ್ಡ್ ಅಭಿಯಂತರರು**
**ಮತ್ತು ಕಾ.ಪಾ. ಅಭಿಯಂತರರು ಬೆಸ್ಕಾಂ**



Scanned with CamScanner

7. ವಾರ್ಡ್ 153ರ ಸ್ಥಳೀಯರಾದ ಶ್ರೀ. ಕಮಲ್ ಕಬೀರ್ ರವರು ಮಾತನಾಡಿ ಎಸ್.ಆರ್.ಕೆ ಗಾರ್ಡನ್ ಸುತ್ತಾಮುತ್ತ ಹಾಗೂ ಬಿ.ಹೆಚ್.ಇ.ಎಲ್ ಲೇಔಟ್ ವ್ಯಾಪ್ತಿಯಲ್ಲಿ ನಿಲ್ದಾಣವಲ್ಲದ ಜಾಗದಲ್ಲಿ ಅನಧಿಕೃತವಾಗಿ ನಿಲುಗಡೆ ಮಾಡುತ್ತಿರುವ ವಾಹನಗಳ ಮಾಲೀಕರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಮೈಕೊ ಲೇಔಟ್ ಸಂಚಾರ ಪೊಲೀಸ್ಠಾಣೆ ರವರಿಗೆ ಈ ಬಗ್ಗೆ ಹಿಂದಿನ ಸಭೆಗಳಲ್ಲಿ ತಿಳಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದಿರುವುದು ವಿಷಾದನೀಯ ಸಂಗತಿ. ಆದ್ದರಿಂದ ಈ ವಿಷಯದ ಬಗ್ಗೆ ಹೆಚ್ಚು ಗಮನ ಹರಿಸುವಂತೆ ಹಾಗೂ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಸಹಾಯಕ ಪೊಲೀಸ್ ಆಯುಕ್ತರು ಸಂಚಾರ ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್ ಸಂಚಾರ, ಮೈಕೊಲೇಔಟ್ ಪೊಲೀಸ್ ಠಾಣೆ ರವರು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು

**ಕ್ರಮ : ಸಹಾಯಕ ಪೊಲೀಸ್ ಆಯುಕ್ತರು ಸಂಚಾರ**
**ಹಾಗೂ ಪೊಲೀಸ್ ಇನ್ಸ್‌ಪೆಕ್ಟರ್, ಮೈಕೋಲೇಔಟ್ ಸಂಚಾರ**

8. ವಾರ್ಡ್ 153ರ ಸ್ಥಳೀಯರಾದ ಶ್ರೀ. ಅನೀಸ್ ಅಹಮದ್ ರವರು ಮಾತನಾಡಿ ಎಸ್.ಆರ್.ಕೆ ಗಾರ್ಡನ್‌ನಲ್ಲಿರುವ ಪ್ರತಿಯೊಂದು ಮನೆಗೂ ಪಾಲಿಕೆಯ ಕಂದಾಯ ಇಲಾಖೆ ರವರು ನೀಡಿರುವ ಸಂಖ್ಯೆಗಳನ್ನು ನಮೂದಿಸಬೇಕೆಂದು ಕೋರಿದರು ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಕಂದಾಯ ಇಲಾಖೆ ರವರು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.

**ಕ್ರಮ : ಸಹಾಯಕ ಕಂದಾಯ ಅಧಿಕಾರಿಗಳು**
**(ಹೊಂಬೇಗೌಡನಗರ) ಉಪವಿಭಾಗ**

9. ವಾರ್ಡ್ 153ರ ಸ್ಥಳೀಯರಾದ ಶ್ರೀ. ಕಮಲ್ ಕಬೀರ್ ರವರು ಮಾತನಾಡಿ ಎಸ್.ಆರ್.ಕೆ ಗಾರ್ಡನ್‌ನ ಅಡ್ಡರಸ್ತೆಗಳು ಮತ್ತು ಮುಖ್ಯರಸ್ತೆಗಳಿಗೆ ನಾಮಫಲಕಗಳನ್ನು ಅಳವಡಿಸುವಂತೆ ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ವಾರ್ಡಿನ ಅಭಿಯಂತರರು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.

**ಕ್ರಮ : ವಾರ್ಡ್ ಅಭಿಯಂತರರು**



Scanned with CamScanner

10. ವಾರ್ಡ್ 153ರ ಸ್ಥಳೀಯರಾದ ಶ್ರೀ. ರಘುನಾಥ್ ರವರು ಮಾತನಾಡಿ ಟಿ.ಮರಿಯಪ್ಪ ರಸ್ತೆಯ ಗಿರಿಯಾಸ್ ಶೋ ರೂಂ ಹತ್ತಿರ, ಮಾಧವನ್ ಉದ್ಯಾನವನಕ್ಕೆ ಬಂದು ತಲುಪುವ ರಸ್ತೆಯ ಹತ್ತಿರ Road Ramblers ಗಳನ್ನು ಅಳವಡಿಸಲು ಕೋರಿದರು. ಈ ಬಗ್ಗೆ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಜಯನಗರ ಸಂಚಾರ ಪೋಲೀಸ್ ಠಾಣೆ ರವರು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ತೀರ್ಮಾನಿಸಲಾಯಿತು.

**ಕ್ರಮ: ಪೋಲೀಸ್ ಇನ್ಸ್‌ಪೆಕ್ಟರ್, ಜಯನಗರ ಸಂಚಾರ**

11. ವಾರ್ಡ್ 153ರ ಸ್ಥಳೀಯರಾದ ಶ್ರೀ. ರಘುನಾಥ್ ರವರು ಮಾತನಾಡಿ 1ನೇ ಬ್ಲಾಕ್ ಜಯನಗರ ವ್ಯಾಪ್ತಿಗೆ ಹತ್ತು ಜನ ಪೌರಕಾರ್ಮಿಕರ ಅವಶ್ಯಕತೆ ಇದ್ದು, ಈ ಬಗ್ಗೆ ಪರಿಶೀಲಿಸಿ ಪೌರಕಾರ್ಮಿಕರನ್ನು ನಿಯೋಜಿಸಿದ್ದಲ್ಲಿ ಸ್ವಚ್ಛತಾಕಾರ್ಯಕ್ಕೆ ಅನುಕೂಲವಾಗುವುದೆಂದು ಸಭೆಯಲ್ಲಿ ಕೋರಿದರು. ಈ ವಿಷಯವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ರವರು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**ಕ್ರಮ: ಸ.ಕಾ.ನಿ. ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಿಕ್ಕಪೇಟೆ**

ಮೇಲಿನ ಎಲ್ಲಾ ಅಂಶಗಳನ್ನು ಕ್ರಮಬದ್ಧವಾಗಿ ನಿರ್ವಹಿಸಲು ಹಾಜರಿದ್ದ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಸಿ ಮುಂದಿನ ಸಭೆಗೆ ಕಡ್ಡಾಯವಾಗಿ ಗೈರುಹಾಜರಾಗಿರುವ ಇತರೆ ಇಲಾಖೆಯವರು ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ತಿಳಿಸುತ್ತಾ ಸಭೆ ಮುಕ್ತಾಯಗೊಳಿಸಲಾಯಿತು.

| | |
|---|---|
| (ನವೀನ್‌ಕುಮಾರ್ ಕೆ.) | (ವರಲಕ್ಷ್ಮಮ್ಮ ಎಲ್) |
| ಕಾರ್ಯದರ್ಶಿ | ನೋಡಲ್ ಅಧಿಕಾರಿ |
| ವಾರ್ಡ್–153 ಜಯನಗರ | ವಾರ್ಡ್–153 ಜಯನಗರ |



Scanned with CamScanner